ನಿಯಮ-72
ಕ್ರ-127

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ.ಸಲೀಂ ಅಹ್ಮದ್ ಇವರ ನಿಯಮ-72 ಅಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ**

**ಸೂಚನೆ:**

ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶಗಳನ್ನು ನಿಯಮಾನುಸಾರ ಇಲಾಖೆಯು ಭರ್ತಿ ಮಾಡದೇ ಇರುವುದರಿಂದ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಇರುವ ಸಾಂವಿಧಾನಿಕ ಹಕ್ಕನ್ನು ಕಸಿದುಕೊಂಡಂತಾಗಿದೆ. ಸದರಿ ಈ ಹಿಂಬಾಕಿ (ಬ್ಯಾಕ್‌ಲಾಗ್) ಹುದ್ದೆಗಳನ್ನು ಶೀಘ್ರಗತಿಯಲ್ಲಿ ನಿಯಮಾನುಸಾರ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ತ್ವರಿತಗತಿಯಲ್ಲಿ ಅನುಷ್ಠಾನಗೊಳಿಸುವ ಸಲುವಾಗಿ ನಿಯಮ 72 ರ ಅಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.

**ಹೇಳಿಕೆ:**

ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಒಟ್ಟು-1190 ಬ್ಯಾಕ್‌ಲಾಗ್ ಹುದ್ದೆಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಈ ಪೈಕಿ ಒಟ್ಟು-814 ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಇನ್ನು 376 ಬ್ಯಾಕ್‌ಲಾಗ್ ಹುದ್ದೆಗಳು ಭರ್ತಿ ಮಾಡಲು ಬಾಕಿ ಉಳಿದಿದ್ದು, ಈ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡಲು ಇಲಾಖಾ ಹಂತದಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿತ್ತು.

ಈ ಮಧ್ಯೆ ಕೋವಿಡ್-19ರ ಪ್ರಯುಕ್ತ, ಸರ್ಕಾರವು ಪತ್ರ ಸಂಖ್ಯೆ:ಇಡಿ/98/ಯುಪಿಸಿ/2020, ದಿನಾಂಕ:13.08.2020 ರಲ್ಲಿ ಆರ್ಥಿಕ ಮಿತವ್ಯಯ ಆದೇಶವನ್ನು ಜಾರಿಗೊಳಿಸಿದ್ದರಿಂದ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಯನ್ನು ತಡೆಹಿಡಿಯಲಾಗಿತ್ತು.

ಪ್ರಸ್ತುತ, ಆರ್ಥಿಕ ಇಲಾಖೆಯು ಕೋವಿಡ್-19 ಆರ್ಥಿಕ ಮಿತವ್ಯಯವನ್ನು ಸಡಿಲಿಸಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸಹಮತಿಸಿರುವುದರಿಂದ ಸರ್ಕಾರದ ಪತ್ರ ಸಂಖ್ಯೆ:ಇಡಿ/56/ಯುಪಿಸಿ/2019(ಇ), ದಿನಾಂಕ:18.07.2022 ರಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಆಯುಕ್ತಾಲಯವು ದಿನಾಂಕ:29.09.2022, 10.10.2022, 13.10.2022 ಹಾಗೂ 01.12.2022 ರಂದು ವೀಡಿಯೊ ಕಾನ್ಫರೆನ್ಸ್ ಮೂಲಕ ಸಭೆಯನ್ನು ಆಯೋಜಿಸಿದ್ದು, ಸದರಿ ಸಭೆಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ತುರ್ತಾಗಿ ಕ್ರಮ ಕೈಗೊಂಡು ಇಲಾಖೆಗೆ ಪ್ರಸ್ತಾವನೆ ಸಲ್ಲಿಸುವಂತೆ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಹಾಗೂ ಸಂಬಂಧಪಟ್ಟ ಆಡಳಿತ ಮಂಡಳಿಗಳಿಗೆ ತಿಳಿಸಲಾಗಿದೆ. ಆದ್ದರಿಂದ, ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಆಡಳಿತ ಮಂಡಳಿಗಳಿಂದ ಪ್ರಸ್ತಾವನೆ ಸ್ವೀಕೃತಗೊಂಡ ಕೂಡಲೇ ನಿಯಮಾನುಸಾರ ಪರಿಶೀಲಿಸಿ ಇಲಾಖಾ ವತಿಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಸಂಬಂಧಪಟ್ಟಂತೆ ಆಯುಕ್ತಾಲಯದಲ್ಲಿ

ಈಗಾಗಲೇ ಸ್ವೀಕೃತಗೊಂಡಿರುವ ಒಟ್ಟು-70 ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಶೈಕ್ಷಣಿಕ ದಾಖಲಾತಿಗಳ ನೈಜತೆ ವರದಿ ಪಡೆಯಲು ಇಲಾಖಾ ವತಿಯಿಂದ ಕ್ರಮ ಕೈಗೊಳ್ಳಲಾಗಿದೆ. ಈ ಅಭ್ಯರ್ಥಿಗಳ ನೈಜತೆ ವರದಿ ಸ್ವೀಕೃತಗೊಂಡ ನಂತರ ಹಾಗೂ ಇನ್ನುಳಿದ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ನೇಮಕಾತಿ ಅನುಮೋದನೆಗಾಗಿ ಆಯುಕ್ತಾಲಯದಿಂದ ಪ್ರಸ್ತಾವನೆಗಳು ಸರ್ಕಾರಕ್ಕೆ ಸ್ವೀಕೃತಗೊಂಡಲ್ಲಿ ಪರಿಶೀಲಿಸಿ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

**ಇಡಿ 175 ಯುಪಿಸಿ 2022**

(ಡಾ|| ಅಶ್ವತ್ಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಇಲಾಖೆ ಸಚಿವರು